# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-19 ಕಾರ್ಯನಿರತ ಗ್ರಾಮ ಪಂಚಾಯತಿ ಸಿಬ್ಬಂದಿ ಮತ್ತು ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರು ಮತ್ತು ಗ್ರಾಮ ಪಂಚಾಯತಿಗಳ ಗ್ರಂಥಪಾಲಕರು ಮರಣ ಹೊಂದಿದಲ್ಲಿ ರೂ:30.00ಲಕ್ಷಗಳ ಪರಿಹಾರ ಪಾವತಿಸುವ ಬಗ್ಗೆ

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿಪಿಆರ್ 535 ಜಿಪಿಎಸ್ 2020, ದಿನಾಂಕ:29-08-2020.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಜಿಪಿಎಸ್ 2021, ದಿನಾಂಕ:28-06-2021.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು, ಇವರ ಪತ್ರ ಸಂಖ್ಯೆ:ಡಿಇವಿ8/ ಕೋವಿಡ್/ 2022-23/ಇ20310, ದಿನಾಂಕ:22-12-2022.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ, ಇವರ ಪತ್ರ ಸಂಖ್ಯೆ:ಜಿಪಂಕೋ/ ಸಿಡಿಪಿ(5)/ ಸಿಆರ್6(ಬಿ)/ 2021-22, ದಿನಾಂಕ:22-12-2022.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ, ಇವರ ಪತ್ರ ಸಂಖ್ಯೆ:ಜಿಪಂಉ/ ಆಡಳಿತ/ ಸಿಆರ್/ ಕೋವಿಡ್19/ 2022-23, ದಿನಾಂಕ:22-12-2022.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:10-03-2023ರಂದು ನಡೆದ ಸಭೆಯ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ-1ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣ ಕಾರ್ಯಕ್ರಮಗಳಡಿ ಗ್ರಾಮ ಪಂಚಾಯತಿಗಳಿಂದ ನಿಯೋಜಿತ ಸಿಬ್ಬಂದಿಯವರುಗಳು ರೋಗಗ್ರಸ್ಥರ ಸಂಪರ್ಕದಿಂದ ಮರಣ ಹೊಂದಿದಲ್ಲಿ, ಜಿಲ್ಲಾ ಆರೋಗ್ಯಾಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳು ಪ್ರಮಾಣೀಕರಿಸಿದಲ್ಲಿಅಂಥವರ ಕುಟುಂಬಕ್ಕೆರೂ:30.00ಲಕ್ಷಗಳನ್ನು ಜಿಲ್ಲಾ ಪಂಚಾಯತಿ/ ತಾಲ್ಲೂಕು ಪಂಚಾಯತಿಗಳಲ್ಲಿ ಲಭ್ಯವಿರುವ ಅನುದಾನದಿಂದ ವೆಚ್ಚ ಭರಿಸುವ ಬಗ್ಗೆ ಆದೇಶಿಸಲಾಗಿರುತ್ತದೆ.

ಇದಕ್ಕೆ ಸಂಬಂಧಿಸಿದಂತೆ, ಮೇಲೆ ಓದಲಾದ-2ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣ ಕಾರ್ಯಕ್ರಮಗಳಡಿ ಗ್ರಾಮ ಪಂಚಾಯತಿಗಳಿಂದ ನಿಯೋಜಿತ ಸಿಬ್ಬಂದಿಯವರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದಲ್ಲಿ ಅವರ ಕುಟುಂಬದವರಿಗೆ ಪರಿಹಾರ ನೀಡಲು ಅಥವಾ ಕೋವಿಡ್-19 ಸೋಂಕಿನಿಂದ ಅನಾರೋಗ್ಯಗೊಂಡಲ್ಲಿ, ಸದರಿ ಚಿಕಿತ್ಸೆಗಾಗಿ ತಗುಲುವ ವೈದ್ಯಕೀಯ ವೆಚ್ಚವನ್ನು ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತಿ ಆಸ್ವಾಸನೆ ನಿಧಿಯನ್ನು ಜಿಲ್ಲಾ ಪಂಚಾಯತಿಗಳಲ್ಲಿ ರಚಿಸುವ ಬಗ್ಗೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ-3 ಮತ್ತು4ರಂತೆ ಮೈಸೂರು ಮತ್ತು ಕೋಲಾರ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕರುಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳಲ್ಲಿ ಜಿಲ್ಲಾ ಪಂಚಾಯತಿಗಳಿಂದ ಅನುಮೋದನೆಗೊಂಡಿರದ ಗ್ರಾಮ ಪಂಚಾಯತಿ ನೌಕರರಿಗೆ ಪರಿಹಾರವನ್ನು ಒದಗಿಸಿರುವುದಿಲ್ಲವೆಂದೂ ಹಾಗೂ ಈ ಮೃತ ಗ್ರಾಮ ಪಂಚಾಯತಿ ನೌಕರರ ಕುಟುಂಬಸ್ಥರೂ ಕೂಡಾ ಪರಿಹಾರ ಒದಗಿಸುವಂತೆ ಜಿಲ್ಲಾ ಪಂಚಾಯತಿಗೆ ಮನವಿಗಳನ್ನು ಸಲ್ಲಿಸಿದ್ದು, ಈ ಬಗ್ಗೆ ಮಾರ್ಗದರ್ಶನ ನೀಡುವಂತೆ ಕೋರಿರುತ್ತಾರೆ.

ಮುಂದುವರೆದು, ಮೇಲೆ ಓದಲಾದ-5ರಂತೆ ಉಡುಪಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಂದ ಸ್ವೀಕೃತವಾದ ಪ್ರಸ್ತಾವನೆಯಲ್ಲಿ, ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕು ಪಂಚಾಯತಿಯ ಸರ್ಕಾರಿ ವಾಹನದ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಬಾಹ್ಯ ಮೂಲದ ವಾಹನ ಚಾಲಕರು, ತಾಲ್ಲೂಕು ಪಂಚಾಯತಿ

ಕಾರ್ಯನಿರ್ವಾಹಕ ಅಧಿಕಾರಿಯರೊಂದಿಗೆ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣ ಕೆಲಸಗಳಲ್ಲಿ ತೊಡಗಿಕೊಂಡಿದ್ದ ಸಮಯದಲ್ಲಿ ಕೋವಿಡ್ ಸೋಂಕಿಗೆ ತುತ್ತಾಗಿ ಮೃತರಾಗಿದ್ದು, ಸದರಿ ವಿಷಯವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ಕೋವಿಡ್-19 ನಿಯಂತ್ರಣ ಕೆಲಸಗಳಲ್ಲಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ಭಾಗಿಯಾಗಿದ್ದ ಮೃತ ಬಾಹ್ಯ ಮೂಲದ ವಾಹನ ಚಾಲಕರಿಗೆ ಜಿಲ್ಲಾ ಪಂಚಾಯತಿಯಲ್ಲಿನ ಆಶ್ವಾಸನೆ ನಿಧಿಯಲ್ಲಿ ಲಭ್ಯವಿರುವ ಅನುದಾನದಲ್ಲಿ, ಒಂದಷ್ಟು ಮೊಬಲಗನ್ನು ಪರಿಹಾರವಾಗಿ ನೀಡಲು ಅವಕಾಶ ಕಲ್ಪಿಸಿಕೊಟ್ಟಲ್ಲಿ ಅವರ ಕುಟುಂಬಕ್ಕೆ ಸಹಾಯವಾಗಲಿರುತ್ತದೆ ಎಂಬುದಾಗಿ ಕೋರಿರುತ್ತಾರೆ.

ಈ ಕುರಿತು ಮೇಲೆ ಓದಲಾದ-6ರ ಸಭೆಯಲ್ಲಿ, ಕೋವಿಡ್-19 ಸಾಂಕ್ರಾಮಿಕ ರೋಗ ತಡೆಗಟ್ಟುವಿಕೆ ಕಾರ್ಯದಲ್ಲಿ ನಿಯೋಜನೆಗೊಂಡು ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಮೃತರಾದ ಅನುಮೋದನೆಗೊಳ್ಳದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ, ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರು ಮತ್ತು ಗ್ರಾಮ ಪಂಚಾಯತಿಗಳ ಗ್ರಂಥಪಾಲಕರಿಗೆ, ಅನುಮೋದನೆಗೊಂಡ ಗ್ರಾಮ ಪಂಚಾಯತಿ ಸಿಬ್ಬಂದಿಯವರ ಕುಟುಂಬದವರಿಗೆ ಪರಿಹಾರ ನೀಡಲು ಇರುವ ಮಾನದಂಡಗಳನ್ನೇ ಅನುಸರಿಸಿ ಆಶ್ವಾಸನೆ ನಿಧಿಯಿಂದ ರೂ:30ಲಕ್ಷಗಳ ಪರಿಹಾರ ಮೊತ್ತವನ್ನು ಪಾವತಿ ಮಾಡಲು ಮತ್ತು ಪ್ರಸ್ತುತ ಬಳಕೆಯಲ್ಲಿರುವ ಆಶ್ವಾಸನೆ ನಿಧಿಯನ್ನು, ಜಿಲ್ಲಾ ಪಂಚಾಯತಿ ಹಂತದಲ್ಲಿ ಮುಂದುವರೆಸಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳ ಮರಣ ಮತ್ತು ನಿವೃತ್ತಿ ಉಪದಾನಗಳ ಪಾವತಿಗಳಿಗೆ ಬಳಸಿಕೊಳ್ಳುವ ಬಗ್ಗೆ ನಿರ್ಧರಿಸಲಾಗಿರುವುದರಿಂದ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ-ಜಿಪಿಎ-18-2023, ದಿನಾಂಕ:28-03-2023.</u>**

ಕೋವಿಡ್-19 ಸಾಂಕ್ರಾಮಿಕ ರೋಗ ತಡೆಗಟ್ಟುವಿಕೆ ಕಾರ್ಯದಲ್ಲಿ ನಿಯೋಜನೆಗೊಂಡು ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಮೃತರಾದ ಅನುಮೋದನೆಗೊಳ್ಳದ ಗ್ರಾಮ ಪಂಚಾಯತಿ ಸಿಬ್ಬಂದಿ, ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರು ಮತ್ತು ಗ್ರಾಮ ಪಂಚಾಯತಿಗಳ ಗ್ರಂಥಪಾಲಕರಿಗೆ, ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಪಿಆರ್ 535 ಜಿಪಿಎಸ್ 2020, ದಿನಾಂಕ:29-08-2020 ಹಾಗೂ ಗ್ರಾಅಪ 179 ಜಿಪಿಎಸ್ 2021, ದಿನಾಂಕ:28-06-2021ರಲ್ಲಿನ ಮಾನದಂಡಗಳನ್ನನುಸರಿಸಿ ಆಶ್ವಾಸನೆ ನಿಧಿಯಿಂದ ರೂ:30ಲಕ್ಷಗಳ ಪರಿಹಾರ ಮೊತ್ತವನ್ನು ಪಾವತಿ ಮಾಡಲು ಮತ್ತು ಪ್ರಸ್ತುತ ಬಳಕೆಯಲ್ಲಿರುವ ಆಶ್ವಾಸನೆ ನಿಧಿಯನ್ನು, ಜಿಲ್ಲಾ ಪಂಚಾಯತಿ ಹಂತದಲ್ಲಿ ಮುಂದುವರೆಸಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳ ಮರಣ ಮತ್ತು ನಿವೃತ್ತಿ ಉಪದಾನಗಳ ಪಾವತಿಗಳಿಗೆ ಬಳಸಿಕೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಲ್.ಕೆ.ಅತೀಕ್)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
6. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ).
7. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
8. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ವೆಬ್ಸೈಟ್, ಗ್ರಾಅಪಂರಾ ಇಲಾಖೆ.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.